## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 162, ಗಿರಿನಗರ, ಬೆಂಗಳೂರು.

### ಮೇ 2022 : ವಾರ್ಡ್ ಸಮಿತಿಯ 2ನೇ ಸಭೆಯ ನಡವಳಿಗಳು

************

ಉಲ್ಲೇಖ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ ಬಿ12(5)/ಪಿಆರ್/35/2020-21, ದಿನಾಂಕ:22-09-2021.

******

ದಿನಾಂಕ : 21-05-2022.

ಸ್ಥಳ : ವಾರ್ಡ್ ಕಛೇರಿ, ಸ್ವಾಮಿ ವಿವೇಕಾನಂದ ಉದ್ಯಾನವನ, ಗಿರಿನಗರ

ಸಮಯ : ಮಧ್ಯಾಹ್ನ 3.00 ಗಂಟೆಗೆ

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಸುನಿಲ್‌ಕುಮಾರ್.ಪಿ | ಮಾನ್ಯ ಮುಖ್ಯ ನಗರ ಯೋಜಕರು ಹಾಗೂ ನೋಡಲ್ ಅಧಿಕಾರಿಗಳು. |
| 2 | ಶ್ರೀ ರಮೇಶ್.ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-162, ಗಿರಿನಗರ. |
| 3 | ಶ್ರೀ ಲಕ್ಷ್ಮಿ ದೇವಿ.ಕೆ | ಬೆಸ್ಕಾಂ ಕಿರಿಯ ಅಭಿಯಂತರರು, ಗಿರಿನಗರ. |
| 4 | ಶ್ರೀ ಸಂತೋಷ್ | ಸೂಪರ್ ವೈಸರ್-SWM. |
| 5 | ಶ್ರೀ ದವಳೇಶ್.ಬಿ | ಬೆಸ್ಕಾಂ ಸಹಾಯಕ ಅಭಿಯಂತರರು, ಗಿರಿನಗರ. |
| 6 | ಶ್ರೀ ಡಾ॥ಅಭಿಜಿತ್ | ಆರೋಗ್ಯಾಧಿಕಾರಿಗಳು, ಗಿರಿನಗರ. |
| 7 | ಶ್ರೀ ವಸಂತ್‌ಕುಮಾರ್ | ಟ್ಯಾಕ್ಸ್ ಇನ್ಸ್‌ಪೆಕ್ಟರ್, ಗಿರಿನಗರ. |
| 8 | ಶ್ರೀ ವಿ.ಶ್ರೀನಿವಾಸ್ | ಟ್ಯಾಕ್ಸ್ ಇನ್ಸ್‌ಪೆಕ್ಟರ್, ಗಿರಿನಗರ. |
| 9 | ಶ್ರೀ ಕುಮುದಾ | ಕಿರಿಯ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 10 | ಶ್ರೀ ಕುಮಾರ್ | ಜಲಪರಿವೀಕ್ಷಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 11 | ಶ್ರೀ ರಂಜೀತ್ | ಮಾರ್ಷಲ್, ಗಿರಿನಗರ ವಾರ್ಡ್. |
| 12 | ಶ್ರೀ ಎಸ್.ಎಂ.ಆರ್.ಪ್ರಸಾದ್ | ವಾರ್ಡ್ ಸಮಿತಿ ಸದಸ್ಯರು-ಗಿರಿನಗರ. |
| 13. | ಶ್ರೀ. ಸತೀಶ್ | ವಾರ್ಡ್ ಸಮಿತಿ ಸದಸ್ಯರು-ಗಿರಿನಗರ. |

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ಆದ ಶ್ರೀ ಸುನಿಲ್‌ಕುಮಾರ್.ಪಿ ರವರು ಸ್ವ ಪರಿಚಯ ಮಾಡಿಕೊಂಡು ಸದಸ್ಯರೆಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹೊಸಕೆರೆಹಳ್ಳಿ ಕ್ರಾಸ್ ರಸ್ತೆಯಲ್ಲಿ ವಾಹನಗಳ ನಿಲುಗಡೆಗೆ ರಸ್ತೆಯ ಎರಡು ಬದಿಗಳಲ್ಲಿ ಸಮ ಮತ್ತು ಬೆಸ ಸಂಖ್ಯೆ ದಿನಾಂಕಗಳನ್ನು ನಮೂದಿಸಿದ ಫಲಕಗಳನ್ನು ಅಳವಡಿಸಲು ಸಂಚಾರಿ ಪೋಲೀಸ್ ಠಾಣೆಗೆ ಸೂಚಿಸಿದರು.

2. ನಂದಗೋಕಲ ಕಲ್ಯಾಣಮಂಟಪ ಬಳಿ ಹೊಸ ಟ್ರಾನ್ಸಫಾರ್‌ಮರ್ ಅಳವಡಿಸುವ ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸಬೇಕೆಂದು ಸಭೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

3. ಶ್ರೀ ವಿದ್ಯಾನಗರ 1ನೇ ಅಡ್ಡ ರಸ್ತೆಯಲ್ಲಿ ಗಿರಿನಗರ ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಒಳಚರಂಡಿ ಕೊಳವೆ ಬದಲಾಯಿಸುವ ಕಾಮಗಾರಿ ಪ್ರಾರಂಭಿಸಿರುವುದರಿಂದ ಸದರಿ ರಸ್ತೆಯಲ್ಲಿ ಬೆಸ್ಕಾಂನ 11 ಕೆ.ವಿ. ಕೇಬಲ್ ಎಲ್ಲೆಲ್ಲಿ ಹಾದು ಹೋಗಿರುವ ಬಗ್ಗೆ ಬೆಸ್ಕಾಂ ವತಿಯಿಂದ ಲೈನ್ ಡ್ರಾಯಿಂಗ್ ಪಡೆದು ಎಚ್ಚರಿಕೆಯಿಂದ ಕಾಮಗಾರಿ ನಿರ್ವಹಿಸಬೇಕೆಂದು ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಸೂಚಿಸಿದರು.

4. ನಂಬರ್:16/5, 18 ನೇ ಮುಖ್ಯ ರಸ್ತೆಯ ಮುನೇಶ್ವರ ಬ್ಲಾಕ್‌ನಲ್ಲಿ ಕುಡಿಯುವ ನೀರನ್ನು ಸರಿಯಾಗಿ ಪೂರೈಸುತ್ತಿಲ್ಲದರ ಬಗ್ಗೆ ಸಾರ್ವಜನಿಕರು ಸಭೆಯಲ್ಲಿ ದೂರಿರುತ್ತಾರೆ.ಸದರಿ ಸಮಸ್ಯೆಯನ್ನು ತಕ್ಷಣ ಬಗೆಹರಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಜಲಪರಿವೀಕ್ಷಕ ಕುಮಾರ್‌ರವರಿಗೆ ಸೂಚಿಸಿ ಕ್ರಮಕೈಗೊಂಡಿರುವುದರ ವರದಿಯ ಬಗ್ಗೆ ಮುಂದಿನ ಸಭೆಯಲ್ಲಿ ನೀಡಬೇಕೆಂದು ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಸೂಚಿಸಿದರು

5. ನಾಗೇಂದ್ರ ಬ್ಲಾಕ್ 9,10 ಮತ್ತು 11 ನೇ ಮುಖ್ಯ ರಸ್ತೆಯಲ್ಲಿ ನೀರಿನ ಅಭಾವವಿರುವುದರ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು, ಅದರಂತೆ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಜಲಪರಿವೀಕ್ಷಕ ಕುಮಾರ್‌ರವರಿಗೆ ತಕ್ಷಣ ಅದನ್ನು ಬಗೆಹರಿಸಿ ಮುಂದೆ ಈ ಸಮಸ್ಯೆ ಬರದಂತೆ ಎಚ್ಚರ ವಹಿಸಬೇಕೆಂದು ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಸೂಚಿಸಿದರು.

6. ಬೆಸ್ಕಾಂ ಮತ್ತು ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ರಸ್ತೆಯನ್ನು ಕತ್ತರಿಸುವ ಅಥವಾ ಗುಂಡಿ ತೆಗೆಯುವ ಸಂಧರ್ಭದಲ್ಲಿ ಕಡ್ಡಾಯವಾಗಿ ಪಾಲಿಕೆಯಿಂದ ಅನುಮತಿ ಪಡೆದು ನಂತರ ಕಾಮಗಾರಿ ನಡೆಸಲು ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ, ತಪ್ಪಿದ್ದಲ್ಲಿ ಸಂಬಂಧಪಟ್ಟ ಅಭಿಯಂತರರನ್ನೇ ನೇರ ಹೊಣೆಗಾರರನ್ನಾಗಿ ಮಾಡುವುದರ ಜೊತೆಗೆ ಎಫ್.ಐ.ಆರ್ ದಾಖಲಿಸುವುದಾಗಿ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಮತ್ತು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

7. ಡಾ॥ಅಭಿಜಿತ್‌ರವರು ಸಭೆಯಲ್ಲಿ ಮಾತಾಡಿ 60 ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರಿಗೆ ಪಾಲಿಕೆ ವತಿಯಿಂದ ಬೂಸ್ಟರ್ ಡೋಸ್ ನೀಡಲಾಗುತ್ತಿದೆ ಮತ್ತು 60 ವರ್ಷ ವಯಸ್ಸಿನ ಕಡಿಮೆ ಇರುವವರಿಗೆ ವಾರ್ಡ್ ವ್ಯಾಪ್ತಿಯ ಖಾಸಗಿ ಆಸ್ಪತ್ರೆಯಲ್ಲಿ ನೀಡಲಾಗುತ್ತಿದೆ ಎಂಬ ಮಾಹಿತಿಯನ್ನು ಸಭೆಯಲ್ಲಿ ಎಲ್ಲರ ಗಮನಕ್ಕೆ ತಂದಿರುತ್ತಾರೆ.

8. ಡಾ॥ಅಭಿಜಿತ್‌ರವರು ಸಭೆಯಲ್ಲಿ ವಾರ್ಡ್ ವ್ಯಾಪ್ತಿಯ ಪ್ರತಿಯೊಂದು ಶಾಲೆಯಲ್ಲಿ 18 ವರ್ಷಕ್ಕಿಂತ ಕಡಿಮೆ ಇರುವ ಮಕ್ಕಳಿಗೆ ಮೊದಲನೇ ಹಂತದ ವ್ಯಾಕ್ಸಿನ್ ನೀಡಲಾಗಿರುತ್ತದೆ ಎಂಬ ಮಾಹಿತಿಯನ್ನು ಸಭೆಯಲ್ಲಿ ಎಲ್ಲರ ಗಮನಕ್ಕೆ ತಂದಿರುತ್ತಾರೆ.

9. ಆಟೋ ಟಿಪ್ಪರ್‌ಗಳಲ್ಲಿ ಕಸವನ್ನು ಹೆಚ್ಚಿನ ಪ್ರಮಾಣದಲ್ಲಿ ಹಾಕಿಕೊಂಡು ರಸ್ತೆಯಲ್ಲಿ ಸಂಚರಿಸುವ ಸಮಯದಲ್ಲಿ ವಾಹನದಿಂದ ರಸ್ತೆಗೆ ಬೀಳುತ್ತಿರುವುದನ್ನು ಗಮನಿಸಲಾಗಿದ್ದು ಅದನ್ನು ಸರಿಪಡಿಸಿ ಇನ್ನು ಮುಂದೆ ಈ ರೀತಿ ಆಗದಂತೆ ನಿಗಾವಹಿಸಲು ಸಭೆಯಲ್ಲಿ ಹಾಜರಿದ್ದ ಗುತ್ತಿಗೆದಾರರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

10. ಆಟೋ ಟಿಪ್ಪರ್‌ಗಳ ಕೆಲವು ಚಾಲಕರುಗಳು ರಜೆಯಲ್ಲಿ ಇದ್ದ ದಿನಗಳಲ್ಲಿ ದಿನನಿತ್ಯದ ಕೆಲಸ ಕಾರ್ಯಗಳಿಗೆ ಯಾವುದೇ ಅಡಚಣೆಯಾಗದಂತೆ ಬದಲಿ ಚಾಲಕರಗಳ ವ್ಯವಸ್ಥೆ ಮಾಡಲು ಸಭೆಯಲ್ಲಿ ಸಂಬಂದಪಟ್ಟ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

11. ಕಂದಾಯ ಪಾವತಿ ರಶೀದಿಯಲ್ಲಿನ ಸ್ವತ್ತಿನ ವಿಳಾಸದ ಭಾಗದಲ್ಲಿ "ಬೆಂಗಳೂರು" ಎಂಬುದನ್ನು ಸೇರಿಸಲು ಕ್ರಮ ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಟ್ಯಾಕ್ಸ್ ಇನ್ಸ್ ಪೆಕ್ಟರ್ ರವರಿಗೆ ಸೂಚಿಸಿದರು.

12. ಎಸ್.ಎ.ಎಸ್.ಪದ್ಧತಿಯಲ್ಲಿ ಕಂದಾಯ ಪಾವತಿಸಿರುವ ಸ್ವತ್ತುಗಳನ್ನು ನಿಯಮದಲ್ಲಿ ಅವಕಾಶವಿರುವಂತೆ 5% ಶೇಕಡ ಪರಿಶೀಲಿಸಲು ಸಂಬಂದಪಟ್ಟ ಟ್ಯಾಕ್ಸ್ ಇನ್ಸ್‌ಪೆಕ್ಟರ್ ರವರಿಗೆ ಸೂಚಿಸಿದರು.

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

21/05/2022

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 162, ಗಿರಿನಗರ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 162, ಗಿರಿನಗರ

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು, ಬೃಬೆ.ಮ.ಪಾಲಿಕೆ, ಎಸ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ವಲಯ ಆಯುಕ್ತರು ( ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು. ಬಸವನಗುಡಿ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು. ಬಸವನಗುಡಿ ರವರ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.